ಇಂದು ದಿನಾಂಕಃ 06.11.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ಮಾಡಿಸಲಾಯಿತು.

**ಮುಂದುವರೆದ ಪಾಟೀ ಸವಾಲುಃ** ಪ್ರತಿವಾದಿ 6(ಎ) ದಿಂದ (ಡಿ) ರವರ ಪರ ಶ್ರೀ ಯು ಬಿ ಜೆ ವಕೀಲರಿಂದಃ

ಅಸಲು ದಾವಾ ಸಂಖ್ಯೆ 128/2000 ರಲ್ಲಿ ರಾಜಿಯಾದ ಸಂದರ್ಭದಲ್ಲಿ ಶಿವಪ್ಪ ಮಲ್ಲಪ್ಪ ಬಿಳಕಿ ರವರಿಗೆ ಹೋದ ಆಸ್ತಿಯನ್ನು ಹೊರತುಪಡಿಸಿ ಉಳಿದ 10 ಗುಂಟೆ ಜಮೀನನ್ನು ಮೌನೇಶಪ್ಪ ರವರಿಗೆ ಕೊಟ್ಟಿರುತ್ತಾರೆ ಎಂದರೆ ಸಾಕ್ಷಿಯು ಆ ರೀತಿ ಕೊಟ್ಟಿರುವಂತೆ ಮಾಡಿರುತ್ತಾರೆ ಎಂದು ನುಡಿದಿರುತ್ತಾರೆ. ನನ್ನ ತಂದೆ ಓಡಾಡಿಕೊಂಡು ಕೆಲಸ ಮಾಡುತ್ತಿದ್ದಾರೆ. ಸಾಕ್ಷಿಯು ಮುಂದುವರೆದು ನನ್ನ ತಂದೆಗೆ ಪಾರ್ಶುವಾಯು ಆಗಿದ್ದು ಮಾತನಾಡಲು ಆಗುವುದಿಲ್ಲ ಎಂದು ನುಡಿದಿರುತ್ತಾರೆ. ದಾವಾ ಆಸ್ತಿಯನ್ನು ರಾಜಿ ಡಿಕ್ರಿಯಾದಗಿನಿಂದಲೂ 2 ಮತ್ತು 6 ನೇ ಪ್ರತಿವಾದಿಯರು ವಹಿವಾಟು ಮಾಡುತ್ತಿದ್ದಾರೆ ಎಂದರೆ ಸರಿ. ನನ್ನ ತಂದೆಗೆ ದಾವಾ ಆಸ್ತಿಯಲ್ಲಿ ಯಾವುದೇ ಹಕ್ಕು ಇಲ್ಲದೇ ಇದ್ದರೂ ಕೂಡ ಪ್ರತಿವಾದಿಯರಿಗೆ ತೊಂದರೆ ಕೊಡಬೇಕೆಂಬ ದುರುದ್ದೇಶದಿಂದ ಈ ದಾವೆಯನ್ನು ಹೂಡಿದ್ದಾರೆ ಎಂದರೆ ಸರಿಯಲ್ಲ. ನನ್ನ ತಂದೆಗೆ ಸಹಾಯ ಮಾಡುವ ಸಲುವಾಗಿ ನಾನು ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ನನ್ನ ಸಮಕ್ಷಮ

ಓ ಹೇ ಕೇ ಸರಿ ಇದೆ.

ಪ್ರಧಾನ ಸಿ.ಜೆ. ಮತ್ತು ಜೆ.ಎಮ್.ಎಫ್.ಸಿ.,
ಹಿರೇಕೆರೂರು.